All India Radio: Bangalore
Regional Bulletin In Kannada
18.10.2025 / 2.30 p.m.
ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

ಮುಖ್ಯಾಂಶಗಳು

- ರಾಜ್ಯದ ಎಲ್ಲಾ ಜಿಲ್ಲೆಗಳಲ್ಲೂ ಉದ್ಯೋಗ ಮೇಳ ಆಯೋಜನೆ ; ಮುಖ್ಯಮಂತ್ರಿ ಸಿದ್ದರಾಮಯ್ಯ ಭರವಸೆ
- ಬೆಂಗಳೂರಿನಲ್ಲಿಂದು 'ಸಂಸದ್ ಖೇಲ್, ದಾಂಡಿಯ ಮಹೋತ್ಸವಗಳಲ್ಲಿ ಕೇಂದ್ರ ಸಚಿವೆ ಶೋಭಾ ಕರಂದ್ಲಾಜೆ ಭಾಗಿ
- ಶಿಲ್ಲಾಂಗ್ ಪತ್ರಕರ್ತರ ನಿಯೋಗ ಮೈಸೂರಿನ ಪ್ರತಿಷ್ಠಿತ ಕೆಎಸ್ಐಸಿಗೆ ಭೇಟಿ
- ರಾಜ್ಯ ಸೇರಿದಂತೆ ದಕ್ಷಿಣ ಭಾರತದ ಹಲವೆಡೆ ಇಂದಿನಿಂದ ಮೂರು ದಿನಗಳ ಕಾಲ ಭಾರಿ ಮಳೆ ಸಾಧ್ಯತೆ

<><><><>

ಸಾಂಸ್ಕೃತಿಕ ನಗರಿ ಮೈಸೂರಿನಲ್ಲಿ ನಡೆದ ಬೃಹತ್ ಉದ್ಯೋಗ ಮೇಳ ಯಶಸ್ವಿಯಾದ ಹಿನ್ನೆಲೆಯಲ್ಲಿ ಸದ್ಯದಲ್ಲೇ ರಾಜ್ಯದ ಎಲ್ಲಾ ಜಿಲ್ಲೆಗಳಲ್ಲೂ ಉದ್ಯೋಗ ಮೇಳ ಆಯೋಜನೆ ಮಾಡಲಾಗುತ್ತದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದ್ದಾರೆ. ಇಂದು ಮೈಸೂರಿನ ಶಾರದಾದೇವಿ ನಗರದಲ್ಲಿರುವ ಮುಖ್ಯಮಂತ್ರಿಗಳ ನಿವಾಸದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಚಿತ್ತಾಪುರದಲ್ಲಿ ಆರ್‌ಎಸ್‌ಎಸ್ ಪಥಸಂಚಲನಕ್ಕೆ ಅನುಮತಿ ನಿರಾಕರಣೆ ವಿಚಾರವಾಗಿ ಪ್ರತಿಕ್ರಿಯಿಸಿ, ಚಿತ್ತಾಪುರದಲ್ಲಿ ಏನಾಗುತ್ತಿದೆ ಎಂಬುದು ತಿಳಿದಿಲ್ಲ, ಆದರೆ ಸರ್ಕಾರ ಆರ್‌ಎಸ್‌ಎಸ್‌ನ್ನು ಟಾರ್ಗೆಟ್ ಮಾಡಿಲ್ಲ, ಆದೇಶ ಎಲ್ಲಾ ಸಂಘ ಸಂಸ್ಥೆಗಳಿಗೆ ಅನ್ವಯವಾಗುತ್ತದೆ. ಈ ಹಿಂದೆ ಜಗದೀಶ್ ಶೆಟ್ಟರ್ ಮುಖ್ಯಮಂತ್ರಿಯಾಗಿದ್ದಾಗ ಸಾರ್ವಜನಿಕ ಸ್ಥಳದಲ್ಲಿ ಕಾರ್ಯಕ್ರಮ ಮಾಡಲು ಅನುಮತಿ ಕಡ್ಡಾಯ ಎಂದು ಜಾರಿ ಮಾಡಿದ್ದ ಆದೇಶವನ್ನೇ ಮುಂದುವರಿಸಲಾಗಿದೆ ಎಂದು ತಿಳಿಸಿದ್ದಾರೆ. ನಿನ್ನೆ ಮೈಸೂರಿನ ಮಹಾರಾಜ ಕಾಲೇಜು ಮೈದಾನದಲ್ಲಿ ಬೃಹತ್ ಉದ್ಯೋಗ ಮೇಳದಲ್ಲಿ ಒಟ್ಟು ೨೩೫ ಕಂಪನಿಗಳು, ೧೩ ಸಾವಿರದ ೨೮೯ ಅಭ್ಯರ್ಥಿಗಳು

ಪಾಲ್ಗೊಂಡಿದ್ದರು. ಇದರಲ್ಲಿ ೧ ಸಾವಿರದ ೩೪೮ ಅಭ್ಯರ್ಥಿಗಳು ಆಯ್ಕೆಯಾಗಿದ್ದಾರೆ ಎಂದು ಅವರು ತಿಳಿಸಿದರು.

<><><>

ಬೆಂಗಳೂರಿನ ಡಾ. ರಾಜ್‌ಕುಮಾರ್ ಒಳಾಂಗಣ ಕ್ರೀಡಾಂಗಣದಲ್ಲಿ ಇಂದು ಸಂಸದ್ ಖೇಲ್ ಮಹೋತ್ಸವ ಕ್ರೀಡಾ ಸ್ಪರ್ಧೆಯನ್ನು ಕೇಂದ್ರದ ಅತಿಸಣ್ಣ, ಸಣ್ಣ ಮತ್ತು ಮಧ್ಯಮ ಕೈಗಾರಿಕೆಗಳ ಖಾತೆ ರಾಜ್ಯ ಸಚಿವೆ ಶೋಭಾ ಕರಂದ್ಲಾಜೆ ಉದ್ಘಾಟಿಸಿದರು. ಅವರು, ಮಹಾಲಕ್ಷ್ಮಿ ಲೇಔಟ್‌ನ್ ರಾಣಿ ಅಬ್ಬಕ್ಕ ಆಟದ ಮೈದಾನದಲ್ಲಿ ಜರುಗಿದ 'ಬೆಂಗಳೂರು ದಾಂಡಿಯ ಮಹೋತ್ಸವ'ದಲ್ಲಿ ಪಾಲ್ಗೊಂಡರು. ಈ ಸಂದರ್ಭದಲ್ಲಿ, ಬೆಂಗಳೂರು ಉತ್ತರ ಭಾರತೀಯ ಜನತಾ ಪಕ್ಷದ ಜಿಲ್ಲಾಧ್ಯಕ್ಷರುಳಾದ ಎಸ್. ಹರೀಶ್, ಸಂಗಮೇಶ್ ಹದ್ಲಿ, ಬದ್ರಿ ಕಾಕಂಡಕಿ, ದರ್ಶನ್ ಎಸ್ಕೆ, ಅನಂತ್ ದೊಗಾಡಿ, ಈಶ್ವರ್ ಇಂಡಿ, ಶ್ರೀವಸ್ತ್ ಹುನಗುಂದ್ ಸೇರಿದಂತೆ ಇನ್ನಿತರ ಪ್ರಮುಖರು ಉಪಸ್ಥಿತರಿದ್ದರು.

<><><>

ಶಿಲ್ಲಾಂಗ್‌ನ ಕೇಂದ್ರ ವಾರ್ತಾ ಶಾಖೆ ಆಯೋಜಿಸಿದ್ದ ಪತ್ರಿಕಾ ಪ್ರವಾಸದ ಭಾಗವಾಗಿ ಮೇಘಾಲಯ ಮತ್ತು ತ್ರಿಪುರದ ಪತ್ರಕರ್ತರ ನಿಯೋಗವು ಮೈಸೂರಿನ ಪ್ರತಿಷ್ಠಿತ ಕರ್ನಾಟಕ ಸಿಲ್ಕ್ ಇಂಡಸ್ಟ್ರೀಸ್ ಕಾರ್ಪೊರೇಷನ್ ಲಿಮಿಟೆಡ್‌ಗೆ ಭೇಟಿ ನೀಡಿತು. ಈ ಭೇಟಿಯು ಪತ್ರಕರ್ತರಿಗೆ ಭಾರತದ ಅತ್ಯಂತ ಪ್ರಸಿದ್ಧ ಮೈಸೂರು ಸಿಲ್ಕ್‌ನ ಪರಂಪರೆ, ಕರಕುಶಲತೆ ಬಗ್ಗೆ ಮಾಹಿತಿ ಒದಗಿಸಿತು. ಮೈಸೂರು ರೇಷ್ಮೆ ನೇಯ್ಗೆ ಕಾರ್ಖಾನೆಯನ್ನು ಮೂಲತಃ ೧೯೧೨ ರಲ್ಲಿ ಮಹಾರಾಜ ನಾಲ್ವಡಿ ಕೃಷ್ಣರಾಜ ಒಡೆಯರ್ ರಾಜಮನೆತನಕ್ಕೆ ಉತ್ತಮ ರೇಷ್ಮೆ ಉಡುಪುಗಳನ್ನು ಪೂರೈಸಲು ಸ್ಥಾಪಿಸಿದರು. ೧೨೮ ವರ್ಷಗಳಿಗೂ ಹೆಚ್ಚು ಕಾಲದ ಪರಂಪರೆಯೊಂದಿಗೆ, ಕಾರ್ಖಾನೆ ಇಂದು ಭಾರತದ ಜವಳಿ ಶ್ರೇಷ್ಠತೆಯ ಹೆಮ್ಮೆಯ ಸಂಕೇತವಾಗಿ ನಿಂತಿದೆ. ಕಾರ್ಖಾನೆ ಪ್ರವಾಸದ ಸಮಯದಲ್ಲಿ, ಭೇಟಿ ನೀಡಿದ ಪತ್ರಕರ್ತರಿಗೆ ಕೆಎಸ್‌ಐಸಿಯಲ್ಲಿ ಡೈಯಿಂಗ್ ಮಾಸ್ಟರ್ ಕೃಷ್ಣ ಕುಮಾರ್, ರೇಷ್ಮೆ ಉತ್ಪಾದನೆಯ ಪ್ರತಿಯೊಂದು ಹಂತ, ಮಲ್ಬೆರಿ ರೇಷ್ಮೆ ನೂಲುಗಳ ಡಿಗಮ್ಮಿಂಗ್ ಮತ್ತು ಪರಿಸರ ಸ್ನೇಹಿ ಬಣ್ಣ ಹಾಕುವಿಕೆಯಿಂದ ಹಿಡಿದು ನಿಜವಾದ ಚಿನ್ನ ಮತ್ತು ಬೆಳ್ಳಿ ಜರಿಯನ್ನು ಒಳಗೊಂಡ ಸೂಕ್ಷ್ಮವಾದ ಕೈ ನೇಯ್ಗೆ ಪ್ರಕ್ರಿಯೆಯವರೆಗೆ, ಪ್ರತಿ ಮೈಸೂರು ರೇಷ್ಮೆ ಸೀರೆಯ ಸಾಂಪ್ರದಾಯಿಕ ಕೌಶಲ್ಯ ಮತ್ತು ತಾಂತ್ರಿಕ ನಿಖರತೆಯ ಬಗ್ಗೆ ವಿವರಿಸಿದರು.

<><><><>

ಕೇಂದ್ರ ಸರ್ಕಾರದ ಜಲ್‌ಜೀವನ್ ಮಿಷನ್ ಯೋಜನೆಯಡಿ ವಿಜಯಪುರ ಜಿಲ್ಲೆಯಲ್ಲಿ ಕಾರ್ಯಾತ್ಮಕ ನಲ್ಲಿ ಸಂಪರ್ಕ ಕಾಮಗಾರಿಗಳನ್ನು ಕೈಗೊಳ್ಳಲಾಗಿದೆ. ಹೀಗೆ ವ್ಯವಸ್ಥಿತವಾಗಿ ಕಾಮಗಾರಿಗಳನ್ನು ಪೂರ್ಣಗೊಳಿಸಲು ಕ್ರಮ ಜರುಗಿಸಲಾಗಿದೆ. ಈ ಕಾಮಗಾರಿಗಳಿಗಾಗಿ ಅಂದಾಜು ಅನುದಾನ ೮೯೭ ಕೋಟಿ ರೂಪಾಯಿಗಳಲ್ಲಿ ಈವರೆಗೆ ೫೬೦ ಕೋಟಿ ೯೫ ಲಕ್ಷ ರೂಪಾಯಿಗಳನ್ನು ಖರ್ಚು ಮಾಡಲಾಗಿದೆ. ಈ ಯೋಜನೆಯಡಿಯಲ್ಲಿ ಒಟ್ಟು ೪ ಲಕ್ಷದ ೬೪ ಸಾವಿರ ಮನೆಗಳಿಗೆ ಕಾರ್ಯಾತ್ಮಕ ನಲ್ಲಿ ಸಂಪರ್ಕ ಕಲ್ಪಿಸುವ ಗುರಿಯನ್ನು ನಿಗದಿಪಡಿಸಲಾಗಿದ್ದು, ಈ ಪೈಕಿ ೩ ಲಕ್ಷದ ೯೮ ಸಾವಿರದ ಮನೆಗಳಿಗೆ ಕಾರ್ಯಾತ್ಮಕ ನಲ್ಲಿ ಸಂಪರ್ಕವನ್ನು ಕಲ್ಪಿಸಲಾಗಿದೆ ಎಂದು ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ವಿಭಾಗದ ಕಾರ್ಯನಿರ್ವಾಹಕ ಅಭಿಯಂತ ತಾರಾನಾಥ್ ಶಂಕರ್ ಆಕಾಶವಾಣಿಗೆ ಮಾಹಿತಿ ನೀಡಿದ್ದಾರೆ.

ಧ್ವನಿ : ತಾರಾನಾಥ್ ಶಂಕರ್ (೩೫ ಸೆಕೆಂಡ್‌ಗಳು)

<><><><>

ರಾಜ್ಯ ಸರ್ಕಾರ ತನ್ನ ವೈಫಲ್ಯಗಳನ್ನು ಮರೆಮಾಚಲು ಕರ್ನಾಟಕ ರಾಜ್ಯದ ಜನರನ್ನ ದಿಕ್ಕು ತಪ್ಪಿಸುವ ಕಾರ್ಯತಂತ್ರ ರೂಪಿಸಲು ಆರ್‌ಎಸ್‌ಎಸ್ ಸಂಘಟನೆಯನ್ನು ಬಳಸಿಕೊಳ್ಳುತ್ತಿದೆ ಎಂದು ವಿಧಾನ ಪರಿಷತ್ ಸದಸ್ಯ ಡಿ.ಎಸ್. ಅರುಣ್ ಆರೋಪಿಸಿದ್ದಾರೆ. ನಿರಂತರವಾಗಿ ಕೇಳಿ ಬರುತ್ತಿರುವ ಅಧಿಕಾರ ಹಂಚಿಕೆ, ಮುಖ್ಯಮಂತ್ರಿಯ ಬದಲಾವಣೆ, ಸಚಿವ ಸಂಪುಟ ವಿಸ್ತರಣೆ, ಸಚಿವರ ರಾಜೀನಾಮೆ, ಕ್ಷೇತ್ರ ಅಭಿವೃದ್ಧಿಗೆ ಮತ್ತು ಶಾಸಕರ ನಿಧಿಗೆ ಯಾವುದೇ ಅನುದಾನ ನೀಡದೆ ಇರುವುದು ಹಾಗೂ ಇತ್ತೀಚೆಗೆ ನಡೆಯುತ್ತಿರುವ ಜಾತಿ ಸಮೀಕ್ಷೆಯಲ್ಲಿ ಅತಿಹೆಚ್ಚಿನ ತೊಡಕುಗಳು ಹೀಗೆ ನಿರಂತರ ಸರ್ಕಾರದ ಎಡವಟ್ಟುಗಳನ್ನು ಮರೆಮಾಚಲು ಮೇಲ್ನೋಟಕ್ಕೆ ಆರ್‌ಎಸ್‌ಎಸ್ ಅನ್ನು ಗುರಿಮಾಡಿ, ವಿಷಯಾಂತರ ಮಾಡಲು ಹೊರಟಿರುವುದು ಕಂಡು ಬರುತ್ತಿದೆ ಎಂದು ಅವರು ಹೇಳಿದರು.

<><><><>

ಪಠ್ಯದಷ್ಟೆ ಕ್ರೀಡೆಯೂ ಮುಖ್ಯ. ಕ್ರೀಡೆಯಲ್ಲಿ ರಾಜ್ಯ, ರಾಷ್ಟ್ರ ಮತ್ತು ಅಂತಾರಾಷ್ಟ್ರೀಯ ಮಟ್ಟದಲ್ಲಿ ಸಾಧನೆ ಮಾಡಬಹುದಾಗಿದೆ. ಉತ್ತಮ ಕ್ರೀಡಾಪಟುಗಳಾಗುವಂತೆ ಯಾದಗಿರಿ ಜಿಲ್ಲಾ ಉಸ್ತುವಾರಿ ಸಚಿವ ಶರಣಬಸಪ್ಪ ದರ್ಶನಾಪುರ ಕರೆ ನೀಡಿದ್ದಾರೆ. ಯಾದಗಿರಿ ಜಿಲ್ಲೆಯ ಸುರಪುರ ನಗರದ

ಕ್ರೀಡಾಂಗಣದಲ್ಲಿ ಹಮ್ಮಿಕೊಂಡಿದ್ದ ಪ್ರಸಕ್ತ ಸಾಲಿನ ಕಲಬುರಗಿ ವಿಭಾಗ ಮಟ್ಟದ ೧೪ ರಿಂದ ೧೭ ವಯೋಮಿತಿಯ ಪ್ರಾಥಮಿಕ ಮತ್ತು ಪ್ರೌಢಶಾಲೆಯ ಬಾಲಕ-ಬಾಲಕಿಯರ ಕೊಕ್ಕೊ ಕ್ರೀಡಾಕೂಟಕ್ಕೆ ಚಾಲನೆ ನೀಡಿ ಮಾತನಾಡಿದರು.

<><><><>

ರಾಜ್ಯ ಸೇರಿದಂತೆ ದಕ್ಷಿಣ ಭಾರತದ ಹಲವು ರಾಜ್ಯಗಳಲ್ಲಿ ಇಂದಿನಿಂದ ಮೂರು ದಿನಗಳ ಕಾಲ ಭಾರಿ ಮಳೆಯಾಗುವ ಸಾಧ್ಯತೆಯಿದೆ ಎಂದು ಭಾರತೀಯ ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ. ಆಂಧ್ರ ಪ್ರದೇಶ, ಕೇರಳ, ಮಾಹೆ, ಲಕ್ಷದ್ವೀಪ್, ತಮಿಳುನಾಡು, ಪುದುಚೇರಿ, ಕಾರೈಕಲ್‌ನಲ್ಲಿ ಭಾರಿ ಮಳೆಯಾಗುವ ಸಾಧ್ಯತೆಯಿದೆ. ಅಲ್ಲದೇ, ಕೊಂಕಣ ಗೋವಾ, ಮಧ್ಯ ಮಹಾರಾಷ್ಟ್ರ ಮತ್ತು ತೆಲಂಗಾಣದಲ್ಲೂ ಮಳೆಯಾಗಲಿದೆ ಎಂದು ತಿಳಿಸಲಾಗಿದೆ. ಕರ್ನಾಟಕ, ಕೇರಳ ಕರಾವಳಿ ಭಾಗದಲ್ಲಿ ಗಂಟೆಗೆ ೫೫ ಕಿಲೋಮೀಟರ್ ವೇಗದಲ್ಲಿ ಗಾಳಿ ಬೀಸಲಿದ್ದು, ಮೀನುಗಾರರು ಸಮುದ್ರಕ್ಕೆ ಇಳಿಯದಂತೆ ಮುನ್ನೆಚ್ಚರಿಕೆ ನೀಡಲಾಗಿದೆ. ರಾಜ್ಯದ ಕರಾವಳಿಯ ಬಹುತೇಕ ಕಡೆ, ದಕ್ಷಿಣ ಒಳನಾಡಿನ ಕೆಲವೆಡೆ ಹಾಗೂ ಉತ್ತರ ಒಳನಾಡಿನಲ್ಲಿ ಮುಂದಿನ ಮೂರು ದಿನಗಳಲ್ಲಿ ಉತ್ತಮ ಮಳೆಯಾಗುವ ಸಾಧ್ಯತೆಯಿದೆ ಎಂದು ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ.

<><><><>

ಮಾಲಿನ್ಯ ರಹಿತ ಮತ್ತು ಸುರಕ್ಷಿತಾ ದೀಪಾವಳಿ ಎಲ್ಲರ ಆದ್ಯತೆಯಾಗಬೇಕೆಂದು ದಾವಣಗೆರೆ ಜಿಲ್ಲಾ ಮಾಲಿನ್ಯ ನಿಯಂತ್ರಣ ಮಂಡಳಿಯ ಪರಿಸರ ಅಧಿಕಾರಿ ರಾಜಶೇಖರ್ ಪುರಾಣಿಕ್ ಹೇಳಿದ್ದಾರೆ. ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿ ಹಾಗೂ ಪರಿಸರ ಸಂರಕ್ಷಣಾ ವೇದಿಕೆಯಿಂದ ದಾವಣಗೆರೆಯ ಸೇಂಟ್‌ಜಾನ್ಸ್ ಪ್ರೌಢಶಾಲೆಯಲ್ಲಿಂದು ಹಮ್ಮಿಕೊಂಡಿದ್ದ ಸುರಕ್ಷಾ ದೀಪಾವಳಿ-೨೦೨೫ ಕುರಿತ ಜಾಗೃತಿ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು. ಪಟಾಕಿ ಹಚ್ಚುವಾಗ ಮಕ್ಕಳು ಕಣ್ಣಿನ ಬಗ್ಗೆ ಹೆಚ್ಚಿನ ಜಾಗೃತಿ ವಹಿಸಬೇಕು. ದಾವಣಗೆರೆ ನಗರವೊಂದರಲ್ಲಿ ಪ್ರತಿವರ್ಷ ದೀಪಾವಳಿ ಸಂದರ್ಭದಲ್ಲಿ ಪಟಾಕಿ ಸಿಡಿತದಿಂದ ಸಾವಿರಕ್ಕೂ ಅಧಿಕ ಕಣ್ಣು, ಚರ್ಮ ಹಾಗೂ ಉಸಿರಾಟದ ತೊಂದರೆ ಅನುಭವಿಸುತ್ತಿರುವ ಪ್ರಕರಣಗಳ ಕಂಡು ಬಂದಿದೆ. ಈ ಹಿನ್ನೆಲೆಯಲ್ಲಿ ಹೆಚ್ಚು ಜಾಗ್ರತೆ ವಹಿಸಬೇಕು ಎಂದು ಹೇಳಿದರು.

<><> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <><>